ಸಂ: ಬಿ9/ನೇಮಕಾತಿ/ವಿವ-4/2015-16

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಯವರ ಕಚೇರಿ,
(ಮುಖ್ಯಸ್ಥರು, ಅರಣ್ಯ ಪಡೆ)
ಅರಣ್ಯ ಭವನ, ಮಲ್ಲೇಶ್ವರಂ,
ಬೆಂಗಳೂರು-3, ದಿನಾಂಕ: 12-09-2017

ಇವರಿಗೆ,
ಸಂಬಂಧಿಸಿದ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು
ಹಾಗೂ ನೇಮಕಾತಿ ಪ್ರಾಧಿಕಾರಿಗಳು

**ತುರ್ತು**

**ವಿಷಯ:** 6 ಉಪ ವಲಯ ಅರಣ್ಯಾಧಿಕಾರಿ ಹಾಗೂ ಮೋಜಣಿದಾರ ಹುದ್ದೆಗಳಿಗೆ ಆಯ್ಕೆಯಾದ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ಹೊರಡಿಸಿ, ವೃತ್ತಿ ತರಬೇತಿಗೆ ನಿಯೋಜಿಸುವ ಕುರಿತು

**ಉಲ್ಲೇಖ:**
1. ಈ ಕಛೇರಿಯ ಅಧಿಸೂಚನೆ ಸಂಖ್ಯೆ: ಬಿ9-ನೇಮಕಾತಿ-ವಿವ-4/2015-16 ದಿನಾಂಕ: 28.03.2016
2. ಈ ಕಛೇರಿಯ ಪತ್ರದ ಸಮ ಸಂಖ್ಯೆ ದಿನಾಂಕ: 26.04.2017
3. ಈ ಕಛೇರಿಯ ಪತ್ರದ ಸಮ ಸಂಖ್ಯೆ ದಿನಾಂಕ: 07.09.2017

* * * * * *

ಉಲ್ಲೇಖ (1) ರ ಈ ಕಛೇರಿಯ ಅಧಿಸೂಚನೆಯಲ್ಲಿ 460 ಉಪ ವಲಯ ಅರಣ್ಯಾಧಿಕಾರಿ ಹಾಗೂ ಮೋಜಣಿದಾರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಿ, ಅಧಿಸೂಚನೆ ಹೊರಡಿಸಲಾಗಿತ್ತು. ನೇಮಕಾತಿ ಪ್ರಕ್ರಿಯೆಯನ್ನು ನಿಯಮಾನುಸಾರ ಈಗಾಗಲೇ ಅಂತಿಮಗೊಳಿಸಿ, ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಈ ಹುದ್ದೆಗಳಿಗೆ ಪ್ರಕಟಿಸಲಾಗಿರುತ್ತದೆ. ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿರುವ ಅಭ್ಯರ್ಥಿಗಳಿಗೆ ಮೂಲ ದಾಖಲೆಗಳನ್ನು ಇಲಾಖಾ ವಶ ನೀಡಲು ಮತ್ತು ವೈದ್ಯಕೀಯ ಪರೀಕ್ಷೆಗೆ ಹಾಜರಾಗಲು ಈಗಾಗಲೇ ತಿಳಿಸಲಾಗಿರುತ್ತದೆ.

ಮುಂದುವರೆದು, ಈಗಾಗಲೇ ಉಪ ವಲಯ ಅರಣ್ಯಾಧಿಕಾರಿ ಹಾಗೂ ಮೋಜಣಿದಾರ ಹುದ್ದೆಗೆ ಆಯ್ಕೆಯಾದ 395 ಅಭ್ಯರ್ಥಿಗಳಿಗೆ ಅಂತಿಮ ಆಯ್ಕೆ ಪಟ್ಟಿ ಪ್ರಕಟಿಸಿ, ದಿನಾಂಕ: 25.09.2017 ರಂದು ನೇಮಕಾತಿ ಆದೇಶ ಹೊರಡಿಸಿ, ದಿನಾಂಕ: 01.10.2017 ರಿಂದ ವೃತ್ತಿ ತರಬೇತಿ ಪ್ರಾರಂಭವಾಗುವುದಾಗಿ ತಿಳಿಸಲಾಗಿರುತ್ತದೆ.

ಈ ಕಛೇರಿಯ ಪ್ರಕಟಣೆ ದಿನಾಂಕ: 31.03.2017 ರ ಅನುಬಂಧ – ಎ ಕಡೆಗೆ ನಿಮ್ಮ ಗಮನವನ್ನು ಸೆಳೆಯಲಾಗಿದೆ. ಸದರಿ ಪ್ರಕಟಣೆಯಲ್ಲಿ ಒಟ್ಟು 24 ಅಭ್ಯರ್ಥಿಗಳ ವೈದ್ಯಕೀಯ ವರದಿ, ಗೈರು ಹಾಜರಿ, ಪೂರ್ಣ ದಾಖಲೆಗಳನ್ನು ಸಲ್ಲಿಸದೇ ಇರುವುದು, ವೈದ್ಯಕೀಯ ವರದಿಯಂತೆ ಅನರ್ಹತೆ, ಇತ್ಯಾದಿಗಳ ಕುರಿತಂತೆ ಮಾಹಿತಿಯನ್ನು ಪ್ರಕಟಿಸಲಾಗಿದೆ. ಪ್ರಸ್ತುತ ಈ 24 ಅಭ್ಯರ್ಥಿಗಳ ಪೈಕಿ 6 ಅಭ್ಯರ್ಥಿಗಳ ಕುರಿತಂತೆ ಉಪ ವಲಯ ಅರಣ್ಯಾಧಿಕಾರಿ ಹಾಗೂ ಮೋಜಣಿದಾರ ಹುದ್ದೆಗೆ ಆಯ್ಕೆ ಹೊಂದಲು ಬೇಕಾಗಿರುವ ಎಲ್ಲಾ ದಾಖಲೆಗಳನ್ನು ಹಾಗೂ ವೈದ್ಯಕೀಯ ವರದಿ ಲಭ್ಯವಾಗಿರುತ್ತದೆ. ಹೀಗಾಗಿ, ಈ 6 ಅಭ್ಯರ್ಥಿಗಳು ಉಪ ವಲಯ ಅರಣ್ಯಾಧಿಕಾರಿ ಹಾಗೂ ಮೋಜಣಿದಾರ ಹುದ್ದೆಗೆ ಆಯ್ಕೆ ಹೊಂದಲು ಅರ್ಹರಾಗಿರುತ್ತಾರೆ. 6 ಉಪ ವಲಯ ಅರಣ್ಯಾಧಿಕಾರಿ ಹಾಗೂ ಮೋಜಣಿದಾರ ಹುದ್ದೆಗೆ ಆಯ್ಕೆ ಹೊಂದಿರುವ ಅಭ್ಯರ್ಥಿಗಳ ಅಂತಿಮ ಆಯ್ಕೆ ಪಟ್ಟಿಯನ್ನು ಈ ಪತ್ರದೊಂದಿಗೆ ಪ್ರಕಟಿಸಲಾಗಿದೆ ಹಾಗೂ ಈ ಅಭ್ಯರ್ಥಿಗಳಿಗೆ ಸ್ಥಳ ನಿಯುಕ್ತಿ ಆದೇಶವನ್ನು ಹೊರಡಿಸಲಾಗಿದೆ.

ಕುಮಾರಿ ಶೃತಿ ಸಾಂಗಲ್ ನೋಂದಣಿ ಸಂಖ್ಯೆ: 51799 ಇವರ ಕುರಿತಂತೆ ವೈದ್ಯಕೀಯ ಪರೀಕ್ಷೆಯು ಬಾಕಿ ಇದ್ದು, ಈ ಪರೀಕ್ಷೆಯನ್ನು ಸರ್ಕಾರಿ ವೈದ್ಯರಿಂದ ನಡೆಸಿ, ಅಭ್ಯರ್ಥಿ ಅರ್ಹರಾದಲ್ಲಿ ಮಾತ್ರ ನೇಮಕಾತಿ ಆದೇಶ ಹೊರಡಿಸುವುದು

ಉಲ್ಲೇಖ (2) ಮತ್ತು (3) ರ ಪತ್ರದಲ್ಲಿ ತಿಳಿಸಿರುವಂತೆ ಈ ಪತ್ರದೊಂದಿಗೆ ಪ್ರಕಟಿಸಿರುವ ಅಂತಿಮ ಆಯ್ಕೆ ಪಟ್ಟಿಯಲ್ಲಿರುವ 6 ಅಭ್ಯರ್ಥಿಗಳು ಕ್ರಮ ಕೈಗೊಳ್ಳುವುದು

12/9/17

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ
(ಮುಖ್ಯಸ್ಥರು, ಅರಣ್ಯ ಪಡೆ)

1. ಪ್ರತಿಯನ್ನು ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ), ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಕಳುಹಿಸಿದೆ.

2. ಪ್ರತಿಯನ್ನು ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಮೌಲ್ಯಮಾಪನ, ಕಾರ್ಯಯೋಜನೆ, ಸಂಶೋಧನೆ ಮತ್ತು ತರಬೇತಿ), ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಕಳುಹಿಸಿದೆ.
3. ಪ್ರತಿಯನ್ನು ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಮಾನವ ಸಂಪನ್ಮೂಲ ಅಭಿವೃದ್ಧಿ), ಗುಂಗರಘಟ್ಟಿ, ಧಾರವಾಡ ಇವರಿಗೆ ಕಳುಹಿಸುತ್ತಾ, 6 ಅಭ್ಯರ್ಥಿಗಳ ಪಟ್ಟಿಯನ್ನು ಈ ಪತ್ರದೊಂದಿಗೆ ಕಳುಹಿಸುತ್ತಾ, ಸದರಿ ಅಭ್ಯರ್ಥಿಗಳನ್ನು ಸಂಬಂಧಿಸಿದ ತರಬೇತಿ ಸಂಸ್ಥೆಗಳಿಗೆ ಹಂಚಿಕೆ ಮಾಡಿ, ಹಂಚಿಕೆ ಮಾಡಿದ ಪಟ್ಟಿಯನ್ನು ದಿನಾಂಕ: 16.09.2017 ರೊಳಗಾಗಿ ಈ ಕಛೇರಿಗೆ ಸಲ್ಲಿಸಲು ತಿಳಿಸಿದೆ ಮತ್ತು ದಿನಾಂಕ: 01.10.2017 ರಿಂದ ಈ ಎಲ್ಲಾ ಅಭ್ಯರ್ಥಿಗಳಿಗೆ ವೃತ್ತಿ ತರಬೇತಿ ಪ್ರಾರಂಭಿಸಲು ತಿಳಿಸಿದೆ.
4. ಪ್ರತಿಯನ್ನು ದಿನಾಂಕ: 12.09.2017 ರಂದು ಪ್ರಕಟಗೊಂಡಿರುವ 6 ಉಪ ವಲಯ ಅರಣ್ಯಾಧಿಕಾರಿ ಹಾಗೂ ಮೋಜಣಿದಾರ ಅಭ್ಯರ್ಥಿಗಳಿಗೆ ಕಳುಹಿಸುತ್ತಾ, ಈ ಪತ್ರದಲ್ಲಿ ತಿಳಿಸಿರುವಂತೆ ಕ್ರಮ ಕೈಗೊಂಡು, ದಿನಾಂಕ: 18.09.2017 ರಂದು ನಿಮ್ಮ ಹೆಸರಿನ ಮುಂದೆ ನಮೂದಿಸಿರುವ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಇವರ ಸಮ್ಮುಖ ಹಾಜರಾಗಲು ತಿಳಿಸಲಾಗಿದೆ ಹಾಗೂ ಇಂಡೆಮ್ನಿಟಿ ಬಾಂಡ್‌ನ ಮಾದರಿ ಹಾಗೂ ಕರಾರು ಪತ್ರದ ಮಾದರಿ ಮತ್ತು ಪೋಲೀಸ್ ತಪಾಸಣಾ ವರದಿಯ ಮಾದರಿ ನಮೂನೆಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಪಡಿಸಲಾಗಿದ್ದು, ಇವುಗಳನ್ನು ಭರ್ತಿ ಮಾಡಿ, ಹಾಜರಾಗಲು ತಿಳಿಸಿದೆ.